## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಜಿಲ್ಲಾ ಯೋಜನಾ ಸಮಿತಿಯ ಕ್ರಿಯಾಶೀಲನೆಗಾಗಿ ಟಾಸ್ಕ್ ಫೋರ್ಸ್ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿಪಿ 229 ಜೆಡ್‌ಪಿಎಸ್ 2000, ದಿನಾಂಕ 12-4-2001.

2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 67 ಜಿಪಸ 2014, ದಿನಾಂಕ 17-3-2015.

*****

ಪ್ರಸ್ತಾವನೆ:

ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಕಲಂ 309, 310 ರ ಪ್ರಕಾರ ಸ್ಥಳೀಯ ಸಂಸ್ಥೆಗಳು ಅಲ್ಲಿನ ಜನರ ಬೇಕು ಬೇಡಿಕೆಗಳನ್ನು ಆಧರಿಸಿ ಯೋಜನೆಯನ್ನು ತಯಾರಿಸಿರುವುದನ್ನು ಜಿಲ್ಲಾ ಮಟ್ಟದ. ಜಿಲ್ಲಾ ಯೋಜನಾ ಸಮಿತಿಯು ಸಂಪೂರ್ಣ ಉಸ್ತುವಾರಿ ಕಾರ್ಯ ನಿರ್ವಹಿಸಬೇಕಾಗಿರುತ್ತದೆ. ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯನ್ವಯ ಜಿಲ್ಲಾ ಯೋಜನಾ ಸಮಿತಿಗಳನ್ನು ರಚಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದರೂ, ನಿಜವಾದ ಬೇರುಮಟ್ಟದ ಯೋಜನಾ ತಯಾರಿಕೆ ಪ್ರಕ್ರಿಯೆ ಅನುಷ್ಠಾನಕ್ಕೆ ಬಂದಿರುವುದಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆ. ಆದ್ದರಿಂದ, 2014-15 ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದಲ್ಲಿ, ಜಿಲ್ಲಾ ಯೋಜನಾ ಸಮಿತಿಗಳನ್ನು ಕ್ರಿಯಾಶೀಲವಾಗಿಸಿ ಬೇರು ಮಟ್ಟದ ಯೋಜನಾ ಪ್ರಕ್ರಿಯೆಗೆ ಚಾಲನೆ ನೀಡುವುದಾಗಿ ಘೋಷಿಸಲಾಗಿತ್ತು. ಅದರಂತೆ, ಉಲ್ಲೇಖ (2)ರ ಸರ್ಕಾರದ ಸುತ್ತೋಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿಗಳ ಕಾರ್ಯವಿಧಾನಗಳ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಿ ಎಲ್ಲಾ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಜಿಲ್ಲಾ ಯೋಜನಾ ಸಮಿತಿಗಳ ಕಾರ್ಯಚಟುವಟಿಕೆ ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ಈಡೇರಿಕೆಯಾಗಲು ಅನುಕೂಲ ಕಲ್ಪಿಸಲು ರಾಜ್ಯ ಪಟ್ಟದಲ್ಲಿ ಒಂದು ಟಾಸ್ಕ್‌ಫೋರ್ಸ್ ಸಮಿತಿ ರಚಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದುದರಿಂದ, ಈ ಆದೇಶ.

### ಆದೇಶ ಸಂಖ್ಯೆ. ಗ್ರಾಅಪ 31 ಯೋಉಮಾ 2015, ಬೆಂಗಳೂರು, ದಿನಾಂಕ 8-05-2015

ಜಿಲ್ಲಾ ಯೋಜನಾ ಸಮಿತಿ ರಾಜ್ಯದಲ್ಲಿ ಏಕಕಾಲಕ್ಕೆ ಕ್ರಿಯಾಶೀಲರನ್ನಾಗಿ ಕಾರ್ಯಾರಂಭಗೊಳಿಸಲು ಈ ಕೆಳಕಂಡಂತೆ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚನೆ ಮಾಡಲಾಗಿದೆ.

| ಕ್ರ.ಸಂ. | ಹೆಸರು | ಪದನಾಮ |
|---|---|---|
| 1 | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು | ಅಧ್ಯಕ್ಷರು |
| 2 | ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

| | | |
|---|---|---|
| 3 | ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ | ಸದಸ್ಯರು |
| 4 | ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 5 | ಶ್ರೀ ನಾರಾಯಣಸ್ವಾಮಿ, ಮಾಜಿ ಲೋಕಸಭಾ ಸದಸ್ಯರು | ಸದಸ್ಯರು |
| 6 | ಶ್ರೀ ಡಿ.ಆರ್. ಪಾಟೀಲ, ಅಧ್ಯಕ್ಷರು, ಎ.ಪಿ.ಎಂ.ಸಿ. | ಸದಸ್ಯರು |
| 7 | ಡಾ. ಪುಷ್ಪಾ ಅಮರನಾಥ, ಅಧ್ಯಕ್ಷರು, ಜಿ.ಪಂ. ಮೈಸೂರು | ಸದಸ್ಯರು |
| 8 | ಶ್ರೀ ಎಫ್.ಎಚ್. ಜಕ್ಕಪ್ಪನವರ, ಮಾಜಿ ಕಾರ್ಯನಿರ್ವಾಹಕ ಉಪಾಧ್ಯಕ್ಷರು, ಡಾ. ಅಂಬೇಡ್ಕರ್ ಪ್ರತಿಷ್ಠಾನ, ಭಾರತ ಸರ್ಕಾರ | ಸದಸ್ಯರು |
| 9 | ಶ್ರೀ ವೆಂಕಟರಾವ್ ಘೋರ್ಪಡೆ, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಬಳ್ಳಾರಿ | ಸದಸ್ಯರು |
| 10 | ಶ್ರೀ ಟಿ.ಆರ್. ರಘುನಂದನ, ಭಾ.ಆ.ಸೇ.(ನಿವೃತ್ತ) | ಸದಸ್ಯರು |
| 11 | ಶ್ರೀ ಅಬ್ದುಲ್ ಅಜೀಜ್, ಪ್ರಾಧ್ಯಾಪಕರು(ನಿವೃತ್ತ), ISEC ಬೆಂಗಳೂರು | ಸದಸ್ಯರು |
| 12 | ಶ್ರೀ ವೀರ ಶಿವಶಂಕರರೆಡ್ಡಿ, ಮುಖ್ಯ ಯೋಜನಾಧಿಕಾರಿ (ನಿವೃತ್ತ), ಜಿ.ಪಂ., ಬಳ್ಳಾರಿ | ಸದಸ್ಯರು |
| 13 | ಶ್ರೀ ಕೆ. ಸುರೇಶ, ಜಂಟಿ ನಿರ್ದೇಶಕರು(ನಿವೃತ್ತ), ಯೋಜನಾ ಇಲಾಖೆ | ಸದಸ್ಯರು |
| 14 | ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ | ಸಂಚಾಲಕರು |

ಸದರಿ ಸಮಿತಿಯು ತ್ರೈಮಾಸಿಕ ಸಭೆ ಸೇರಿ ಉಲ್ಲೇಖ (1) ಮತ್ತು (2)ರ ಸುತ್ತೋಲೆಗಳಲ್ಲಿ ನೀಡಿರುವ ಮಾರ್ಗಸೂಚಿಯನ್ವಯ ಜಿಲ್ಲಾ ಯೋಜನಾ ಸಮಿತಿಗಳು ಕಾರ್ಯನಿರ್ವಹಿಸುತ್ತಿರುವ ಕುರಿತು ಉಸ್ತುವಾರಿ ಹಾಗೂ ಜಿಲ್ಲಾ ಯೋಜನಾ ಸಮಿತಿಗಳ ಬಲವರ್ಧನೆಗೆ ಅಗತ್ಯ ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು.
4. ಟಾಸ್ಕ್‌ಫೋರ್ಸ್ ಸಮಿತಿಯ ಎಲ್ಲಾ ಸದಸ್ಯರುಗಳಿಗೆ.
5. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
7. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ.
8. ಎಲ್ಲಾ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಸರ್ಕಾರದ ಜಂಟಿ ಕಾರ್ಯದರ್ಶಿ(ಆ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.